# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಶಕ್ಷಾವಲಿ ಖಾದ್ರಿ (ನಿವೃತ್ತ), ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅರೋಲಿ ಗ್ರಾಮ ಪಂಚಾಯಿತಿ, ಮಾನ್ವಿ ತಾಲ್ಲೂಕು, ರಾಯಚೂರು ಜಿಲ್ಲೆ, ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/171/ಗ್ರಾಪಂಕಾ/2017 ದಿನಾಂಕ:10.03.2017
2. ಅಪರ ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK:1/DE/465/2017/ARE-14 Dated:23.01.2019
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ ಸಂಖ್ಯೆ: UPLOK:1/DE/465/2017/ARE-14 Dated:25.01.2019
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/90/ಗ್ರಾಪಂಕಾ/2019 ದಿನಾಂಕ:18.02.2019
5. ಶ್ರೀ ಶಕ್ಷಾವಲಿ ಖಾದ್ರಿ (ನಿವೃತ್ತ), ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ:19.03.2019

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಸರ್ಕಾರದ ಆದೇಶದಲ್ಲಿ ಶ್ರೀ ಶಕ್ಷಾವಲಿ ಖಾದ್ರಿ (ನಿವೃತ್ತ), ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅರೋಲಿ ಗ್ರಾಮ ಪಂಚಾಯಿತಿ, ಮಾನ್ವಿ ತಾಲ್ಲೂಕು, ರಾಯಚೂರು ಜಿಲ್ಲೆ. ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಅಪರ ನಿಬಂಧಕರು ವಿಚಾರಣೆಗಳು-14, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

"ದೋಷಾರೋಪಣೆ"

"While you DGO Sri. Shakshavali Khadri (Retired), working as Panchayath Development Officer, Aroli Gram Panchayath, Manvi Taluk, Raichur District, desilting of drainage from Agasi to Sunkalamma temple at Adavi Khanapur in Manvi taluk and providing of Murram to internal road at Rajolli village and providing murram to government hospital in Arahalli village in Manvi taluk was under taken and on investigation following irregularities and illegalities were found;

(a) Estimate for desilting drainage from Agasi to sunkalamma Temple at Adavikhanapur in Manvi Taluk is Rs. 0.25 lakhs and bill for payment of Rs.22,829/- has been sanctioned. But bills in support of the payment made are not produced and M.B to verify whether the work actually has been carried out has not been produced. No documents for having made payment to the labourers has been produced.

(b) Estimate for providing murram to internal roads at Rajolli Village in Manvi Taluk is Rs. 0.75 lakhs and bill for payment of Rs.69,575/- has been sanctioned. But bills in support of the payment made are not produced and M.B. to verify whether the work

actually has been carried out has not been produced. No documents for having made payment to the labourers has been produced.

(c) Estimate for providing murram to Government Hospital Arahalli Village in Manvi Taluk is Rs. 1.00 lakh and bill for payment of Rs. 85,530/- has been sanctioned. But bills in support of the payment made are not produced and M.B to verify whether the work actually has been carried out has not been produced. No documents for having made payment to the labourers has been produced.

Therefore, you DGO has failed to maintain absolute integrity and devotion to duty and committed an act which is unbecoming of a Government Servant and therefore you are guilty of misconduct under Rule 3(1) (i) to (iii) of KCS (Conduct) Rules 1966".

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಶಕ್ಷಾವಲಿ ಖಾದ್ರಿ (ನಿವೃತ್ತ), ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅರೋಲಿ ಗ್ರಾಮ ಪಂಚಾಯಿತಿ, ಮಾನ್ವಿ ತಾಲ್ಲೂಕು, ರಾಯಚೂರು ಜಿಲ್ಲೆ. ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಶಕ್ಷಾವಲಿ ಖಾದ್ರಿ (ನಿವೃತ್ತ), ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅರೋಲಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸಿದ ವೇಳೆಯಲ್ಲಿ ಎಸಗಿದ ಅವ್ಯವಹಾರವು ಸಾಬೀತಾಗಿದ್ದು ಸದರಿಯವರು ಈಗ ನಿವೃತ್ತಿಹೊಂದಿರುತ್ತಾರೆ. ಈ ಹಿನ್ನೆಲೆಯಲ್ಲಿ ಮಾನ್ಯ ಉಪಲೋಕಾಯುಕ್ತರು ಸದರಿಯವರ ನಿವೃತ್ತಿ ವೇತನದಲ್ಲಿ 10% ರಷ್ಟು ಮೊತ್ತವನ್ನು ಶಾಶ್ವತವಾಗಿ ತಡೆಯಿಡಿಯುವ ದಂಡನೆ ವಿಧಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಶ್ರೀ ಶಕ್ಷಾವಲಿ ಖಾದ್ರಿ (ನಿವೃತ್ತ), ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅರೋಲಿ ಗ್ರಾಮ ಪಂಚಾಯಿತಿ ಇವರಿಗೆ ನಿಯಮಾನುಸಾರ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸ್ಸನ್ನು ಜಾರಿಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ಸದರಿ ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ತಮ್ಮ ಲಿಖಿತ ಹೇಳಿಕೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಸದರಿಯವರ ಲಿಖಿತ ಹೇಳಿಕೆಯನ್ನು ಪರಿಶೀಲಿಸಲಾಗಿದ್ದು, ಸದರಿಯವರು ಅವರ ವಿರುದ್ಧ ಮಾಡಲಾದ ಎಲ್ಲಾ ಆರೋಪಗಳನ್ನು ತಳ್ಳಿಹಾಕಿರುತ್ತಾರೆ ಆದ್ದರಿಂದ ಇದನ್ನು ಒಪ್ಪಲು ಬರುವುದಿಲ್ಲವಾದ ಕಾರಣ ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ ವಿಚಾರಣಾಧಿಕಾರಿಯವರು ತಮ್ಮ ನಿರ್ಣಯ ಹಾಗೂ ವರದಿಯನ್ನು ದಾಖಲಿಸಿದ್ದು ಅದರ ಸಂಕ್ಷಿಪ್ತ ಸಾರಾಂಶ ಈ ಕೆಳಕಂಡಂತಿದೆ.

" The complainant got the documents in the year 2015 as per the order passed by the Karnataka Information Commission. The DGO has deposed in his cross examination as, "ಆ ಕಾಮಗಾರಿಯಲ್ಲಿ ಹಣ ದುರ್ಬಳಕೆ/ಅವ್ಯವಹಾರ ನಡೆದಿರುತ್ತದೆ ಎಂದು ದೂರುದಾರರು ಆರ್‌ಟಿಐ ಆಕ್ಟ್‌ನ ಅಡಿಯಲ್ಲಿ ದಿ:11.11.2013 ರಂದು ಕೆಲವೊಂದು ದಾಖಲಾತಿಯನ್ನು ಕೇಳಿದ್ದರು ಎನ್ನುವುದು ಸರಿ. ಆಗ ನಾನು ಯಾವುದೇ ದಾಖಲಾತಿಗಳನ್ನು ಅವರಿಗೆ ನೀಡಿರುವುದಿಲ್ಲ ಎನ್ನುವುದು ಸರಿಯಲ್ಲ." This is nothing but a false answer given by the DGO before this authority. Here, it is the defence of the DGO that, the charges are not framed properly, because there is no clarity regarding to whom the documents ought to have been furnished, who had sought for it, etc., But, from the complaint as well as form No.1, it reveal that, this complainant had sought for information and documents from the DGO under RTI Act, which the DGO had not furnished. Thus, the defence of the DGO that, the charges have not been framed correctly, cannot be acceptable. The said defence taken for the name sake only. Later, the complainant got the said documents regarding the above said 13th finance scheme work as per the order of Karnataka Information Commission. But, among the said

documents, some documents do not bear the dates. Those documents are nothing but concocted documents. Hence, it can be held without any hesitation that, the Disciplinary Authority has successfully proved the charges framed against the DGO and about his dereliction of duty and misconduct. On appreciation of entire oral and documentary evidence I hold that evidence I hold that the charges levelled against the DGO established beyond all probabilities. Hence, I answer point No.1 in the .... affirmative".

ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಈ ಕೆಳಕಂಡಂತೆ ಶಿಫಾರಸ್ಸು ಮಾಡಿರುತ್ತಾರೆ.

Having regard to the nature of charge proved against DGO Sri Shakshavali Khadri, it is hereby recommended to the Government for imposing penalty of permanently withholding 10% of pension payable to DGO Sri Shakshavali Shadri (Retired), the then Panchayath Development Officer, Aroli Grama Panchayath, Manvi Taluk, Raichur District.

ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಶ್ರೀ ಶಕ್ಷಾವಲಿ ಖಾದ್ರಿ (ನಿವೃತ್ತ), ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅರೋಲಿ ಗ್ರಾಮ ಪಂಚಾಯಿತಿ ರವರು 2ನೇ ಕಾರಣ ಕೇಳುವ ನೋಟೀಸ್ಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ, ಅಪರ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷ್ಯಧಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುವುದರಿಂದ ಸದರಿಯವರು ನಿವೃತ್ತಿ ಹೊಂದಿರುವುದರಿಂದ, ಸದರಿಯವರ ನಿವೃತ್ತಿ ವೇತನದಿಂದ ಶೇಕಡಾ 10 ರಷ್ಟನ್ನು ಶಾಶ್ವತವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:90:ಗ್ರಾಪಂಕಾ2019 ಬೆಂಗಳೂರು, ದಿನಾಂಕ:11-06-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಶಕ್ಷಾವಲಿ ಖಾದ್ರಿ (ನಿವೃತ್ತ), ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅರೋಲಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸಿದ ವೇಳೆಯಲ್ಲಿ ಎಸಗಿದ ಅವ್ಯವಹಾರವು ಸಾಬೀತಾಗಿರುವುದರಿಂದ ಕರ್ನಾಟಕ ನಾಗರೀಕ ಸೇವಾ ನಿಯಮ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 214(1)(a)(b) ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಸದರಿಯವರ ನಿವೃತ್ತಿ ವೇತನದಿಂದ ಶೇಕಡಾ 10 ರಷ್ಟನ್ನು ಶಾಶ್ವತವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

12/6/19

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ರಾಯಚೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಮಾನ್ವಿ ತಾಲ್ಲೂಕು, ರಾಯಚೂರು ಜಿಲ್ಲೆ.
6. ಶ್ರೀ ಶಕ್ಷಾವಲಿ ಖಾದ್ರಿ (ನಿವೃತ್ತ), ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅರೋಲಿ ಗ್ರಾಮ ಪಂಚಾಯಿತಿ, ಮಾನ್ವಿ ತಾಲ್ಲೂಕು, ರಾಯಚೂರು ಜಿಲ್ಲೆ.
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.